**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ರವರ ನಿಯಮ-72ರ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಕುರಿತು.**

**ಪ್ರಶ್ನೆ :-**

ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆಯ ವ್ಯಾಪ್ತಿಯಲ್ಲಿನ ಶಿಕ್ಷಕರಿಗೆ ಹಿರಿಯ ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಬಡ್ತಿ ನೀಡುವಲ್ಲಿ ಒಂದು ನಿಯಮ, ಪ್ರೌಢಶಾಲೆಯಿಂದ ಪದವಿಪೂರ್ವ ಕಾಲೇಜಿಗೆ ಬಡ್ತಿ ನೀಡುವಲ್ಲಿ ಮತ್ತೊಂದು ನಿಯಮ ರೂಪಿಸಿ, ತಾರತಮ್ಯ ಉಂಟುಮಾಡಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ :-**

**ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ಬಡ್ತಿಗೆ ಸಂಬಂಧಿಸಿದಂತೆ**

ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ಬಡ್ತಿ ನೀಡುವ ವಿಚಾರವಾಗಿ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಜಿ.ಪಿ.ಟಿ. ಶಿಕ್ಷಕರು ಸಲ್ಲಿಸಿದ್ದ ದಾವೆ ಸಂಖ್ಯೆ: 3443-3503/2020 ಮತ್ತು 857-917/2021ರ ಪ್ರಕರಣದ ತೀರ್ಪಿನ ವಿರುದ್ಧವಾಗಿ ರಿಟ್ ಅರ್ಜಿ ಸಂಖ್ಯೆ:16936/2021 ದಿನಾಂಕ:16/09/2021ರಂದು ಮಾನ್ಯ ನ್ಯಾಯಾಲಯದಲ್ಲಿ ಮೇಲ್ಮನವಿ ದಾಖಲಿಸಲಾಗಿದೆ.

- ಪ್ರಾಥಮಿಕ ಶಾಲಾ ಶಿಕ್ಷಕರಿಗೆ ನೇರವಾಗಿ ಪ್ರೌಢ ಶಾಲಾ ಶಿಕ್ಷಕರ ಹುದ್ದೆಗೆ ಬಡ್ತಿ ನೀಡಲಾಗುತ್ತಿತ್ತು. ತದನಂತರ ಜಿಪಿಟಿ ಶಿಕ್ಷಕರು ಮಾನ್ಯ ಕೆ.ಎ.ಟಿ. ನ್ಯಾಯಾಲಯದ ಮೊರೆ ಹೋಗಿ ನೇರವಾಗಿ ಪ್ರೌಢಶಾಲಾ ಸಹ ಶಿಕ್ಷಕರಾಗಿ, ಬಡ್ತಿ ನೀಡುವ ಬದಲು, ಜಿಪಿಟಿ ಶಿಕ್ಷಕರಿಗೆ ಬಡ್ತಿ ನೀಡಿ ತದನಂತರ, ಪ್ರೌಢ ಶಾಲೆ ಶಿಕ್ಷಕರಾಗಿ ಬಡ್ತಿಗೆ ಪರಿಗಣಿಸುವಂತೆ ದಾವೆ ದಾಖಲಿಸಿದ ಹಿನ್ನೆಲೆಯಲ್ಲಿ, ಮಾನ್ಯ ನ್ಯಾಯಾಲಯವು ಪರಿಗಣಿಸುವಂತೆ ಆದೇಶಿಸಿರುತ್ತದೆ. ಆದ್ದರಿಂದ, ಮಾನ್ಯ ನ್ಯಾಯಾಲಯದ ತೀರ್ಪಿನ ವಿರುದ್ಧ ಸರ್ಕಾರದಿಂದ ಮೇಲ್ಮನವಿ ಸಲ್ಲಿಸಲಾಗಿರುತ್ತದೆ.
- ಪರಿಷ್ಕೃತ ಸಿ & ಆರ್ ನಂತೆ ಪ್ರಾಥಮಿಕ ಶಾಲಾ ಶಿಕ್ಷಕರು (ಪಿಎಸ್‌ಟಿ) ತಮ್ಮ ವ್ಯಾಸಂಗದಲ್ಲಿ ಅರ್ಹ ಪದವಿ ಮತ್ತು ಬಿಇಡಿ ವಿದ್ಯಾರ್ಹತೆ ಹೊಂದಿದ ಸೇವಾ ನಿರತ ಶಿಕ್ಷಕರುಗಳಿಗೆ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಗೆ ಬಡ್ತಿ ನೀಡಲು ಶೇ. 50 ನೇರ ನೇಮಕಾತಿ ಮತ್ತು ಶೇ. 50 ಸೇವಾ ನಿರತರಿಗೆ ನಿಗದಿಪಡಿಸಲಾಗಿದೆ. ಇದರಲ್ಲಿ ಶೇ. 30 ಪಿಎಸ್‌ಟಿ ಶಿಕ್ಷಕರುಗಳಿಗೆ + ಶೇ. 15 ಜಿಪಿಟಿ ಶಿಕ್ಷಕರುಗಳಿಗೆ + ಶೇ 5 ವಿಶೇಷ ಶಿಕ್ಷಕರುಗಳಿಗೆ ವೃಂದ ಬಲವನ್ನು ಹಂಚಿಕೆ ಮಾಡಿ ಬಡ್ತಿ ನೀಡಲು ಸಿ & ಆರ್ ತಿದ್ದುಪಡಿ ಪರಿಷ್ಕರಣೆಯು ಪರಿಶೀಲನಾ ಹಂತದಲ್ಲಿದೆ.

**ಪ್ರೌಢಶಾಲಾ ಶಿಕ್ಷಕರ ಹುದ್ದೆಯಿಂದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಕುರಿತು :-**

ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಯಿಂದ ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರ ಹುದ್ದೆಗೆ ಬಡ್ತಿ ಹೊಂದಲು ಪ್ರೌಢಶಾಲಾ ಸಹ ಶಿಕ್ಷಕರಾಗಿ 10 ವರ್ಷಗಳ ಅರ್ಹತಾದಾಯಕ ಸೇವೆಯನ್ನು ಪೂರೈಸಿರಬೇಕು ಒಂದು ವೇಳೆ 10 ವರ್ಷ ಪೂರೈಸಿರುವವರು ಲಭ್ಯವಿಲ್ಲದಿದ್ದಲ್ಲಿ 7 ವರ್ಷ

ಸೇವೆ ಪೂರೈಸುವವರನ್ನು ಬಡ್ತಿಗೆ ಪರಿಗಣಿಸಲಾಗುವುದು. ಪ್ರಸ್ತುತ ಚಾಲ್ತಿಯಲ್ಲಿರುವ 2014 ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಉಪನ್ಯಾಸಕರ ವೃಂದದಲ್ಲಿ ನೇರ ನೇಮಕಾತಿಗೆ ಶೇ. 74 ಮತ್ತು ಶೇ. 01 ರಷ್ಟು ಸೇವಾ ನಿರತ 'ಸಿ' ಗುಂಪಿನ ನೌಕರರಿಗೆ ಹಾಗೂ ಶೇ. 25 ರಷ್ಟು ಸೇವಾ ನಿರತ ಪ್ರೌಢಶಾಲಾ ಸಹ ಶಿಕ್ಷಕರಿಗೆ ಪದವಿಪೂರ್ವ ಶಿಕ್ಷಣ ಇಲಾಖೆ ನಡೆಸುವ ಅರ್ಹತಾದಾಯಕ ಪರೀಕ್ಷೆ ಉತ್ತೀರ್ಣರಾಗುವ ಷರತ್ತಿನಂತೆ ಅನುಪಾತವನ್ನು ಹಂಚಿಕೆ ಮಾಡಿ ಬಡ್ತಿ ಕಲ್ಪಿಸಲಾಗಿರುತ್ತದೆ. ಈ ನಿಯಮಗಳಂತೆ ಪ್ರೌಢಶಾಲಾ ಸಹ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ವೃಂದಕ್ಕೆ ನಿಯಮಾನುಸಾರ ಬಡ್ತಿಯನ್ನು ನೀಡಲಾಗುವುದು.

**ಇಪಿ 156 ಎಸ್‌ಓ ಹೆಚ್ 2023**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.